# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆ: 831/2020**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ1. ಸೋಮಶೇಖರ
ತಂದೆ - ವೆಂಕಟರಾಮೇಗೌಡ
ಸುಮಾರು 63 ವರ್ಷ ವಯಸ್ಸು,
ವಾಸಃ ಉಂಡವಾಡಿ ಗ್ರಾಮ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

## ದೋಷಾರೋಪಣೆ

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

1. ದಿನಾಂಕ 08.08.2020 ರಂದು ಮಧ್ಯಾಹ್ನ 1.30 ಗಂಟೆ ಸಮಯದಲ್ಲಿ ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಉಂಡುವಾಡಿ ಗ್ರಾಮದ ಮಾರಮ್ಮನ ದೇವಸ್ಥಾನದ ಮುಂದೆ ಹಾದು ಹೋಗಿರುವ ಸಾರ್ವಜನಿಕ ರಸ್ತೆಯಲ್ಲಿ ಆರೋಪಿಯಾದ ನೀವು 90 ಎಂಎಲ್‌ನ ಅಳತೆಯ Original Choice Deluxe Whiskey ಕಂಪನಿಯ 1,334/- ರೂ ಬೆಲೆಯ ಒಟ್ಟು 38 ಮದ್ಯದ ಟೆಟ್ರಾ ಪ್ಯಾಕೇಟುಗಳನ್ನು ಅಕ್ರಮವಾಗಿ ಯಾವುದೇ ರಹದಾರಿ ಇಲ್ಲದೇ ಮತ್ತು ಯಾವುದೇ ಅಧಿಕೃತ ಅಂಗಡಿಯ ಬಿಲ್ಲುಗಳು ಇಲ್ಲದೇ ನಿಮ್ಮ ಬಳಿ ಸಂಗ್ರಹಿಸಿ ಇಟ್ಟುಕೊಂಡಿರುತ್ತೀರೆಂದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 32 ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಮಾಡುವ ಉದ್ದೇಶವುಳ್ಳವರಾಗಿ, 90 ಎಂಎಲ್ ನ ಅಳತೆಯ Original Choice Deluxe Whiskey ಕಂಪನಿಯ 1,334/- ರೂ ಬೆಲೆಯ ಒಟ್ಟು 38 ಮದ್ಯದ ಟೆಟ್ರಾ ಪ್ಯಾಕೇಟುಗಳನ್ನು ಅಕ್ರಮವಾಗಿ ತಮ್ಮ ಬಳಿ ಸಂಗ್ರಹಿಸಿಕೊಂಡು ಸಾರ್ವಜನಿಕರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದೀರೆಂದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 34 ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಯಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ಪೂಜಾ ಬೆಳಕೇರಿ)**

ದಿನಾಂಕಃ **02.11.2023**

ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ**.**ದ**.**ನ್ಯಾ**.**ದಂಡಾಧಿಕಾರಿಗಳು**,** ಹುಣಸೂರು**.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ
ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆ: 831/2020**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ 1. ಸೋಮಶೇಖರ
ತಂದೆ - ವೆಂಕಟರಾಮೇಗೌಡ

ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆ: ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ**?**

ಉತ್ತರಃ

ಪ್ರಶ್ನೆ: ತಪ್ಪೊಪ್ಪಿಕೊಳ್ಳುವಿರೋ**,** ವಿಚಾರಣೆಯಾಗಬೇಕೆನ್ನುವಿರೋ**?**

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

(ಪೂಜಾ ಬೆಳಕೇರಿ)
ದಿನಾಂಕಃ **02.11.2023** ಅಪರ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದಂ.ನ್ಯಾ.. ದಂಡಾಧಿಕಾರಿಗಳು, ಹುಣಸೂರು.